All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

20.01.2026 19.35 p.m.

**************

ಮುಖ್ಯಾಂಶಗಳು

- ಪ್ರಧಾನಿ ನರೇಂದ್ರ ಮೋದಿ ಯುಎಇ ಅಧ್ಯಕ್ಷರ ಜೊತೆ ದ್ವಿಪಕ್ಷೀಯ ಮಾತುಕತೆ ವ್ಯಾಪಾರ ಮೌಲ್ಯ ೨೦೦ ಶತಕೋಟಿ ಡಾಲರ್‌ಗೆ ಹೆಚ್ಚಿಸಲು ಸಮಾಲೋಚನೆ
- ಅರಾವಳಿ ಪರ್ವತ ಶ್ರೇಣಿಯ ಕುಂಬಾಲ್‌ಗಢ ವನ್ಯಜೀವಿ ಅಭಯಾರಣ್ಯ ಸೂಕ್ಷ್ಮ ವಲಯವೆಂದು ಘೋಷಿಸಿ ಅಧಿಸೂಚನೆ
- ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್ ಆಯ್ಕೆ; ಚುನಾವಣಾ ಪ್ರಮಾಣಪತ್ರ ಹಸ್ತಾಂತರ
- ಮಹಿಳಾ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್; ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ

***************

ಪ್ರಧಾನಿ ನರೇಂದ್ರ ಮೋದಿ ಹಾಗೂ ಭಾರತ ಭೇಟಿಯಲ್ಲಿರುವ ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಝಾಯೆದ್ ಅಲ್ ನಹ್ಯಾನ್ ದೆಹಲಿಯಲ್ಲಿ ನಿನ್ನೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಎಲ್ಲ ರೂಪ ಮತ್ತು ಪ್ರಕಾರಗಳ ಭಯೋತ್ಪಾದನೆಯನ್ನು ಎರಡೂ ರಾಷ್ಟ್ರಗಳು ತೀವ್ರವಾಗಿ ಖಂಡಿಸಿದ್ದು, ಕಾರ್ಯತಂತ್ರ ರಕ್ಷಣಾ ಪಾಲುದಾರಿಕೆ ನಿಟ್ಟಿನಲ್ಲಿ ಮಹತ್ವದ ದ್ವಿಪಕ್ಷೀಯ ಒಪ್ಪಂದ ಏರ್ಪಟ್ಟಿದೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ, ೨೦೩೨ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರ ಮೌಲ್ಯವನ್ನು ೨೦೦ ಶತಕೋಟಿ ಡಾಲರ್‌ಗೆ ದ್ವಿಗುಣಗೊಳಿಸುವ ಕುರಿತು ಸಮಾಲೋಚನೆ ನಡೆಸಲಾಗಿದೆ ಎಂದರು.

ರಕ್ಷಣೆ, ಬಾಹ್ಯಾಕಾಶ, ಇಂಧನ, ಆಹಾರ ಭದ್ರತೆ ಸೇರಿದಂತೆ ವಿವಿಧ ವಲಯಗಳಲ್ಲಿ ಹಲವು ಒಡಂಬಡಿಕೆಗಳಿಗೆ ಸಹಿ ಹಾಕಲಾಗಿದೆ. ಭಾರತದ ಊPಅಐ ಮತ್ತು ಯುಎಇ ಅಡ್ನಾಕ್ ಗ್ಯಾಸ್ ಸಂಸ್ಥೆಗಳ ನಡುವೆ ತೈಲ ವಿನಿಮಯ ಮತ್ತು ಖರೀದಿ ಒಡಂಬಡಿಕೆ ಏರ್ಪಟ್ಟಿದೆ. ಎರಡೂ ರಾಷ್ಟ್ರಗಳ ನಡುವೆ ನಾಗರಿಕ ಪರಮಾಣು ಸಹಕಾರ ಉತ್ತೇಜಿಸುವ ಬಗ್ಗೆಯೂ ಮಾತುಕತೆ ನಡೆಯಿತು ಎಂದು ಅವರು ಹೇಳಿದರು.

***************

ಅರಾವಳಿ ಪರ್ವತ ಶ್ರೇಣಿಯಲ್ಲಿರುವ ಕುಂಭಾಲ್‌ಗಢ ವನ್ಯಜೀವಿ ಅಭಯಾರಣ್ಯವನ್ನು ಪರಿಸರ-ಸೂಕ್ಷ್ಮ ವಲಯವೆಂದು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಘೋಷಿಸಿ, ಅಧಿಸೂಚನೆಯನ್ನು ಹೊರಡಿಸಿದೆ.

ಈ ವಲಯ ಪ್ರದೇಶದ ಸಸ್ಯ ಮತ್ತು ಪ್ರಾಣಿಗಳನ್ನು ಸಂರಕ್ಷಿಸಲು ಸಹಾಯ ಮಾಡುತ್ತದೆ, ಜೊತೆಗೆ ಅಭಯಾರಣ್ಯದಲ್ಲಿ ಮತ್ತು ಸುತ್ತಮುತ್ತಲಿನ ಸ್ಥಳೀಯ ಸಮುದಾಯಗಳನ್ನು ಬೆಂಬಲಿಸುತ್ತದೆ ಎಂದು

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

***************

ಬಿಜೆಪಿ ಕಾರ್ಯಕಾರಿ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ಪಕ್ಷದ ಹೊಸ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ.

ಪಕ್ಷದ ರಾಷ್ಟ್ರೀಯ ಚುನಾವಣಾಧಿಕಾರಿ ಡಾ.ಕೆ. ಲಕ್ಷ್ಮಣ್ ನವದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಇಂದು ನಡೆದ ಸಂಘಟನ್ ಪರ್ವ್‌ನಲ್ಲಿ ನಬಿನ್ ಅವರನ್ನು ಪಕ್ಷದ ಅಧ್ಯಕ್ಷರನ್ನಾಗಿ ನೇಮಕ ಮಾಡಿರುವುದಾಗಿ ಘೋಷಿಸಿ, ಅವರಿಗೆ ಚುನಾವಣಾ ಪ್ರಮಾಣಪತ್ರವನ್ನು ಹಸ್ತಾಂತರಿಸಿದರು.

ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಜೆ.ಪಿ. ನಡ್ಡಾ ಮತ್ತು ನಿತಿನ್ ಗಡ್ಕರಿ ಅವರು ನಬಿನ್ ಅವರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷರಾಗಿ ನೇಮಕಗೊಂಡಿದ್ದಕ್ಕಾಗಿ ನಬಿನ್ ಅವರನ್ನು ಅಭಿನಂದಿಸಿ, ನಬಿನ್ ಪಕ್ಷದ ಪರಂಪರೆಯನ್ನು ಮುಂದುವರೆಸುತ್ತಾರೆ, ದೇಶದಲ್ಲಿ ಪ್ರಮುಖ ಆರ್ಥಿಕ, ಸಾಮಾಜಿಕ ಮತ್ತು ತಾಂತ್ರಿಕ ಪರಿವರ್ತನೆಗಳಿಗೆ ಸಾಕ್ಷಿಯಾದ ಪೀಳಿಗೆಗೆ ನಬಿನ್ ಸೇರಿದವರು ಎಂದು ಅವರು ಹೇಳಿದರು.

***************

ಬೀದಿ ನಾಯಿಗಳ ವಿಷಯದಲ್ಲಿ ಸುಪ್ರೀಂ ಕೋರ್ಟ್ ಆದೇಶಗಳನ್ನು ಟೀಕಿಸಿದ ಮಾಜಿ ಕೇಂದ್ರ ಸಚಿವೆ ಮೇನಕಾ ಗಾಂಧಿ ಅವರ ಹೇಳಿಕೆಗಳಿಗೆ ಸುಪ್ರೀಂ ಕೋರ್ಟ್ ಇಂದು ಅಸಮಾಧಾನ ವ್ಯಕ್ತಪಡಿಸಿ, ಅವರು ನ್ಯಾಯಾಂಗ ನಿಂದನೆ ಮಾಡಿದ್ದಾರೆ ಎಂದು ತಿಳಿಸಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್, ಸಂದೀಪ್ ಮೆಹ್ತಾ ಮತ್ತು ಎನ್.ವಿ ಅಂಜಾರಿಯಾ ಅವರ ಪೀಠವು ಮಾಜಿ ಸಚಿವರು ಯೋಚಿಸದೆ ಎಲ್ಲರ ವಿರುದ್ಧ ಎಲ್ಲಾ ರೀತಿಯ ಹೇಳಿಕೆಗಳನ್ನು ನೀಡಿದ್ದಾರೆ. ನ್ಯಾಯಾಲಯದ ಔದಾರ್ಯದಿಂದಾಗಿ ಮಾಜಿ ಕೇಂದ್ರ ಸಚಿವರ ವಿರುದ್ಧ ನ್ಯಾಯಾಂಗ ನಿಂದನೆ ಕ್ರಮಗಳನ್ನು ಪ್ರಾರಂಭಿಸುತ್ತಿಲ್ಲ ಎಂದು ಪೀಠ ಹೇಳಿದೆ.

ನಾಯಿಗಳಿಗೆ ಆಹಾರ ನೀಡುವವರನ್ನು ಹೊಣೆಗಾರರನ್ನಾಗಿ ಮಾಡಿಲ್ಲ ಅಥವಾ ಅವರನ್ನು ವ್ಯಂಗ್ಯಮಾಡಲಾಗಿಲ್ಲ, ಆದರೆ ಗಂಭೀರ ಟಿಪ್ಪಣಿ ಮಾಡಲಾಗಿದೆ ಎಂದು ಪೀಠ ಹೇಳಿದೆ.

***************

ಭಾರತದ ಜವಳಿ ಕ್ಷೇತ್ರದ ಬೆಳವಣಿಗೆಯ ಕುರಿತು ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ಸೂಚಿಸಿದ್ದಾರೆ.

ರಾಷ್ಟ್ರದ ಪ್ರಮುಖ ದಿನಪತ್ರಿಕೆಯಲ್ಲಿ ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಅವರು ಬರೆದ ಲೇಖನವನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡ ಅವರು, ಸಾಂಪ್ರದಾಯಿಕ, ಪರಂಪರೆಯ ಉದ್ಯಮದಿಂದ ಜವಳಿ ವಲಯವು ಪ್ರಬಲ, ಉದ್ಯೋಗ ಸೃಷ್ಟಿಸುವ ಮತ್ತು ಜನ ಕೇಂದ್ರಿತ ಬೆಳವಣಿಗೆಯ ಎಂಜಿನ್ ಆಗಿ ಪರಿವರ್ತನೆಗೊಂಡ ಬಗ್ಗೆ ಮಾತನಾಡಿದರು.

ಪಿಎಂ ಮಿತ್ರಾ ಪಾರ್ಕ್‌ಗಳು, ಉತ್ಪಾದನೆಗೆ ಸಂಬಂಧಿಸಿದ ಪ್ರೋತ್ಸಾಹ ಯೋಜನೆಗಳು ಹಾಗೂ ಇತ್ತೀಚೆಗೆ ಸಹಿ ಮಾಡಲಾದ ಮುಕ್ತ ವ್ಯಾಪಾರ ಒಪ್ಪಂದಗಳಂತಹ ಉಪಕ್ರಮಗಳು ವಸ್ತ್ರೋದ್ಯಮದ ಮುಂದಿನ

ಬೆಳವಣಿಗೆಯ ಅಲೆಯನ್ನು ಮುನ್ನಡೆಸುತ್ತಿವೆ ಎಂಬುದನ್ನು ಆ ಲೇಖನ ಒತ್ತಿ ಹೇಳುತ್ತದೆ ಎಂದು ಅವರು ಹೇಳಿದ್ದಾರೆ.

***************

ನವದೆಹಲಿಯಲ್ಲಿ ಮಹಾದೇವ ದೇಸಾಯಿ ಗ್ರಂಥಾಲಯ ವಿಸ್ತರಿತ ವಿಭಾಗವನ್ನು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ಉದ್ಘಾಟಿಸಿದರು.

"ಜ್ಞಾನೋದಯದ ಯುಗ: ಮಹಾತ್ಮ ಗಾಂಧಿಯವರ ದೃಷ್ಟಿ" ಎಂಬ ಪುಸ್ತಕವನ್ನು ಬಿಡುಗಡೆ ಮಾಡಿದರು. ನವದೆಹಲಿಯ ಗಾಂಧಿ ಆಶ್ರಮದಲ್ಲಿ ಹರಿಜನ ಸೇವಕ ಸಂಘಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಉಪರಾಷ್ಟ್ರಪತಿಗಳು ಈ ಪುಸ್ತಕವನ್ನು ಬಿಡುಗಡೆ ಮಾಡಿದರು.

೧೯೩೦ ಮತ್ತು ೧೯೪೦ ರ ದಶಕಗಳಲ್ಲಿ ದೆಹಲಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಮಹಾತ್ಮ ಗಾಂಧಿ ಮತ್ತು ಕಸ್ತೂರ್ಬಾ ಗಾಂಧಿ ಅವರು ತಂಗಿದ್ದ ಆಶ್ರಮದೊಳಗಿನ ಕಸ್ತೂರ್ಬಾ ವಸ್ತುಸಂಗ್ರಹಾಲಯಕ್ಕೂ ಅವರು ಭೇಟಿ ನೀಡಿದರು.

***************

ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯ ಎತ್ತರ ಪ್ರದೇಶಗಳಲ್ಲಿ ಭಯೋತ್ಪಾದಕರನ್ನು ಹಿಮ್ಮೆಟ್ಟಿಸಲು ನಡೆಸುತ್ತಿರುವ ಬೃಹತ್ ಶೋಧ ಕಾರ್ಯಾಚರಣೆ ಮೂರನೇ ದಿನಕ್ಕೆ ಕಾಲಿಟ್ಟಿದ್ದು, ಹಲವಾರು ಜನರನ್ನು ವಿಚಾರಣೆಗಾಗಿ ಬಂಧಿಸಲಾಗಿದೆ.

ಚಳಿಗಾಲದ ತಿಂಗಳುಗಳಲ್ಲಿ ಕನಿಷ್ಠ ನಾಲ್ಕು ಜನರಿಗೆ ಆಹಾರ ಒದಗಿಸಲು ಸಾಕಾಗುವಷ್ಟು ಪಡಿತರ ಮತ್ತು ಇತರ ಸಾಮಗ್ರಿಗಳನ್ನು ಸಂಗ್ರಹಿಸಲು ಹಾಗೂ ಸಾಗಿಸಲು ಭಯೋತ್ಪಾದಕರಿಗೆ ಸಹಾಯ ಮಾಡಿದ ಭೂಗತ ಕಾರ್ಮಿಕರನ್ನು ಗುರುತಿಸಲು ಭದ್ರತಾ ಪಡೆಗಳು ಪ್ರಯತ್ನಿಸುತ್ತಿವೆ.

ಚತ್ರೂ ಪಟ್ಟಿಯ ಮಂದ್ರಲ್-ಸಿಂಗ್‌ಪೋರಾ ಬಳಿಯ ಸೊನ್ನಾರ್ ಗ್ರಾಮದಲ್ಲಿ ಭಾನುವಾರ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು. ಇದು ಗುಂಡಿನ ಚಕಮಕಿಯಲ್ಲಿ ಒಬ್ಬ ಪ್ಯಾರಾಟ್ರೂಪರ್ ಸಾವನ್ನಪ್ಪಿದ್ದರು ಹಾಗೂ ಏಳು ಜನ ಗಾಯಗೊಂಡಿದ್ದರು.

***************

ಕೇಂದ್ರ ಮೀನುಗಾರಿಕೆ ಇಲಾಖೆ ನಾಳೆ ನವದೆಹಲಿಯಲ್ಲಿ ೮೩ ಪಾಲುದಾರ ರಾಷ್ಟ್ರಗಳ ರಾಯಭಾರಿಗಳು ಮತ್ತು ಹೈಕಮಿಷನರ್‌ಗಳೊಂದಿಗೆ ದುಂಡು ಮೇಜಿನ ಸಭೆಯನ್ನು ಆಯೋಜಿಸಲಿದೆ. ಈ ಸಮ್ಮೇಳನದ ಅಧ್ಯಕ್ಷತೆಯನ್ನು ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ವಹಿಸಲಿದ್ದಾರೆ.

ದ್ವಿಪಕ್ಷೀಯ ವ್ಯಾಪಾರ, ಮೀನು ರಫ್ತಿಗೆ ಉತ್ತೇಜನ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆ ಸಂಪರ್ಕಗಳನ್ನು ಬಲಪಡಿಸುವ ಉದ್ದೇಶವನ್ನು ಸಮ್ಮೇಳನ ಹೊಂದಿದೆ. ಏಷ್ಯಾ, ಆಫ್ರಿಕಾ, ಯುರೋಪ್, ಉತ್ತರ ಅಮೆರಿಕಾ, ಓಷಿಯಾನಿಯಾ ಮತ್ತು ಲ್ಯಾಟಿನ್ ಅಮೆರಿಕ ಮತ್ತು ಕೆರಿಬಿಯನ್ ಪಾಲುದಾರ ರಾಷ್ಟ್ರಗಳ ರಾಯಭಾರಿಗಳು ಮತ್ತು ಹೈಕಮಿಷನರ್‌ಗಳ ಭಾಗವಹಿಸಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

***************

ಮುಂಬೈ-ಅಹಮದಾಬಾದ್ ಬುಲೆಟ್ ರೈಲು ಯೋಜನೆಯು ಸ್ಥಿರ ಪ್ರಗತಿಯನ್ನು ಕಾಣುತ್ತಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಕಾರಿಡಾರ್‌ನಾದ್ಯಂತ ಓವರ್‌ಹೆಡ್ ಎಲೆಕ್ಟ್ರಿಫಿಕೇಶನ್ ಮಾಸ್ಟ್‌ಗಳ ಅಳವಡಿಕೆ ಮುಂದುವರೆದಿದೆ. ಈ ಅಭಿವೃದ್ಧಿಯು ಭಾರತದ ಮೊದಲ ಹೈ-ಸ್ಪೀಡ್ ರೈಲು ವ್ಯವಸ್ಥೆಗೆ ವಿದ್ಯುತ್ ಪೂರೈಕೆಯನ್ನು ಸಕ್ರಿಯಗೊಳಿಸುವ ಪ್ರಮುಖ ಹೆಜ್ಜೆಯಾಗಿದೆ. 'ಮೇಕ್ ಇನ್ ಇಂಡಿಯಾ' ಉಪಕ್ರಮದ ಅಡಿಯಲ್ಲಿ ಸ್ಥಿರವಾದ ಆನ್-ಗ್ರೌಂಡ್ ಕಾರ್ಯಗತಗೊಳಿಸುವಿಕೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ.

***************

ಗುಜರಾತ್‌ನ ಕೊಟಂಬಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯುಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

ಲಡಾಖ್‌ನ ಲೇಹ್ ನಗರದಲ್ಲಿ ಇಂದು ಆರನೇ ಆವೃತ್ತಿಯ ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟಕ್ಕೆ ವಿಧ್ಯುಕ್ತ ಚಾಲನೆ ದೊರೆತಿದೆ.

ಲೇಹ್‌ನ ಎನ್‌ಡಿಎಸ್ ಕ್ರೀಡಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಆರನೇ ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟ ೨೦೨೬ ಅನ್ನು ಲೆಫ್ಟಿನೆಂಟ್ ಗವರ್ನರ್ ಕವಿಂದರ್ ಗುಪ್ತಾ ಉದ್ಘಾಟಿಸಿದರು.

ಇದೇ ೨೬ ರವರೆಗೆ ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟ ನಡೆಯಲಿದ್ದು, ೨೦ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಕ್ರೀಡಾಪಟುಗಳು ಐಸ್ ಹಾಕಿ ಮತ್ತು ಐಸ್ ಸ್ಕೇಟಿಂಗ್ ನಂತಹ ಸ್ಪರ್ಧೆಗಳಲ್ಲಿ ಕಣಕ್ಕಿಳಿಯುತ್ತಿದ್ದಾರೆ.

ಉದ್ಘಾಟನಾ ಸಮಾರಂಭದಲ್ಲಿ, ಸ್ಥಳೀಯ ಸಾಂಸ್ಕೃತಿಕ ತಂಡಗಳು ಐಸ್ ರಿಂಕ್‌ನಲ್ಲಿ ಪ್ರದರ್ಶನ ನೀಡಿದ್ದು, ಲಡಾಖ್‌ನ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಪ್ರದರ್ಶಿಸಿವೆ.

ಈ ಬಾರಿಯ ಆವೃತ್ತಿಯಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಸ್ಪೀಡ್ ಸ್ಕೇಟಿಂಗ್ ಮತ್ತು ಶಾರ್ಟ್ ಟ್ರ್ಯಾಕ್ ಸ್ಕೇಟಿಂಗ್ ಜೊತೆಗೆ ಒಲಿಂಪಿಕ್ ಕ್ರೀಡೆಯಾದ ಫಿಗರ್ ಸ್ಕೇಟಿಂಗ್ ಅನ್ನು ಪರಿಚಯಿಸಲಾಗಿದೆ. ೨೦೨೦ ರಿಂದ ರಾಷ್ಟ್ರೀಯ ಮಟ್ಟದ ಖೇಲೋ ಇಂಡಿಯಾ ಚಳಿಗಾಲದ ಕ್ರೀಡಾಕೂಟವನ್ನು ಖೇಲೋ ಇಂಡಿಯಾ ಯೋಜನೆಯಡಿ ಆಯೋಜಿಸಲಾಗುತ್ತಿದೆ.

***************

ಮೆಲ್ಬೋರ್ನ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಗ್ರ್ಯಾನ್ ಸ್ಲ್ಯಾಮ್ ಟೆನ್ನಿಸ್ ಟೂರ್ನಿಯ ಮಹಿಳಾ ಸಿಂಗಲ್ಸ್ ವಿಭಾಗದ ಮೊದಲ ಸುತ್ತಿನ ಪಂದ್ಯದಲ್ಲಿ ಕಝಾಕಿಸ್ತಾನದ ಎಲೆನಾ ರೈಬಾಕಿನಾ, ಸ್ಲೋವೇನಿಯಾದ ಕಾಯಾ ಯುವಾನ್ ಅವರನ್ನು ೬-೪, ೬-೩ ಅಂತರದಲ್ಲಿ ಮಣಿಸಿದ್ದಾರೆ.

ಇನ್ನು ಪೋಲ್ಯಾಂಡ್ ನ ಇಗಾ ಸ್ವಿಯಾಟೆಕ್, ಅಮೆರಿಕಾದ ಮ್ಯಾಡಿಸನ್ ಕೀಸ್ ಕೂಡ ಮುಂದಿನ ಹಂತ ಪ್ರವೇಶಿಸಿದ್ದಾರೆ.

ಪುರುಷರ ಸಿಂಗಲ್ಸ್‌ನಲ್ಲಿ ಇಟಲಿಯ ಯಾನಿಕ್ ಸಿನ್ನರ್, ಫ್ರಾನ್ಸ್‌ನ ಯೋಗೊ ಗ್ಯಾಸ್ಟನ್ ವಿರುದ್ಧ ೬-೨, ೬-೧ ನೇರ ಸೆಟ್ ಅಂತರದಲ್ಲಿ ಗೆಲುವು ಸಾಧಿಸಿ, ಎರಡನೇ ಸುತ್ತು ಪ್ರವೇಶಿಸಿದ್ದಾರೆ.

ಹತ್ತು ಬಾರಿಯ ಆಸ್ಟ್ರೇಲಿಯನ್ ಓಪನ್ ಚಾಂಪಿಯನ್ ಸರ್ಬಿಯಾದ ನೋವಾಕ್ ಜೊಕೊವಿಚ್ ಕೂಡ ಎರಡನೇ ಸುತ್ತು ಪ್ರವೇಶಿಸಿದ್ದಾರೆ.

*******ಮುಕ್ತಾಯ*******